**ಸಾಕ್ಷಿಗೆ ದಿನಾಂಕ: 01-04-2026 ರಂದು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆ: ವಾದಿ ಪರವಾಗಿ ಶ್ರೀ ವಿ.ವಿ ವಕೀಲರಿಂದ:**

ಈ ದಾವೆಗೆ ಪೂರಕವಾಗಿ ಮತ್ತು ಹೆಚ್ಚುವರಿಯಾಗಿ ನಾನು ಕೆಲವು ದಾಖಲೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನನ್ನ ಪರವಾಗಿ ನಿಶಾನೆಯಾಗಿ ಗುರುತಿಸುವಂತೆ ಕೋರುತ್ತೇನೆ. ಸಾಕ್ಷಿ ಹಾಜರುಪಡಿಸಿದ ದಾಖಲೆಗಳನ್ನು ಕೆಳಗಿನಂತೆ ನಿಶಾನೆಗಳಾಗಿ ಗುರುತಿಸಲಾಯಿತು.

| | |
|---|---|
| ನಿ.ಪಿ.–16 | 21.01.2020 ರ ನೊಂದಾಯಿತ ಕ್ರಯ ಪತ್ರ ಹಾಗೂ ಅದಕ್ಕೆ ಲಗತ್ತಾಗಿರುವ 11–ಇ ನಕ್ಷೆ ದಾಖಲೆಗಳು |
| ನಿ.ಪಿ.–17 ಮತ್ತು 18 | ಪಹಣಿಗಳು |

ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರ ಹಾಗೂ ನಾನು ಹಾಜರುಪಡಿಸಿದ ದಾಖಲೆಗಳನ್ನು ಪರಿಗಣಿಸಿ ಸದರಿ ದಾವೆಯನ್ನು ಖರ್ಚು ಸಹಿತ ಡಿಕ್ರಿ ಮಾಡಬೇಕಾಗಿ ಕೋರಿಕೊಳ್ಳುತ್ತೇನೆ.

**ಪಾಟೀ ಸವಾಲು: ಪ್ರತಿವಾದಿ ಮತ್ತು ವಕೀಲರು ಗೈರು ಹಾಜರಿದ್ದು ನ್ಯಾಯದ ದೃಷ್ಟಿಯಿಂದ ಮುಂದೂಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು,**
**ಭದ್ರಾವತಿ.**